# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಕಾರ್ಯಕಲಾಪಗಳ ಪಟ್ಟಿ**

**ಮಂಗಳವಾರ, ದಿನಾಂಕ: 05ನೇ ಜುಲೈ, 2016**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

## 01. ನೂತನ ಸದಸ್ಯರ ಪ್ರಮಾಣ ವಚನ

## 02. ಪ್ರಶ್ನೋತ್ತರ

| | | | |
|---|---|---|---|
| ಅ) | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಹದಿನಾಲ್ಕನೆಯ ಪಟ್ಟಿ |
| ಆ) | **ತಡೆಹಿಡಿಯಲಾದ ಪ್ರಶ್ನೆ:**<br>**ಶ್ರೀ ಬಿ.ಜೆ. ಪುಟ್ಟಸ್ವಾಮಿ,** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 1513, ಪಟ್ಟಿ-13, ಸಮೂಹ-1 | : | **ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು** |
| ಇ) | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಹದಿನಾಲ್ಕನೆಯ ಪಟ್ಟಿ |

## 03. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲಿನ ಚರ್ಚೆ

**ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಸದಸ್ಯರುಗಳಾದ: ಶ್ರೀಮತಿ ಮೋಟಮ್ಮ, ಎಂ.ಕೆ. ಪ್ರಾಣೇಶ್, ಆರ್. ಪ್ರಸನ್ನ ಕುಮಾರ್ ಹಾಗೂ ಇತರರು** ರಾಜ್ಯದಲ್ಲಿ ಅವ್ಯಾಹತವಾಗಿ ನಡೆಯುತ್ತಿರುವ ಅಕ್ರಮ ಮರಳು ದಂಧೆಯಿಂದಾಗಿ ಜನ ಸಾಮಾನ್ಯರಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಮರಳು ಲಭ್ಯವಿಲ್ಲದಂತಹ ಕೃತಕ ಅಭಾವ ಸೃಷ್ಟಿಯಾಗಿರುವ ಪರಿಸ್ಥಿತಿಯ ಬಗ್ಗೆ ಪ್ರಸ್ತಾಪಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀಮತಿ ವಿಮಲಾಗೌಡ** ಅವರು ರಾಜ್ಯದಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ಅತ್ಯಾಚಾರ, ದೌರ್ಜನ್ಯ, ಕೊಲೆ, ಸುಲಿಗೆ, ಸರಗಳ್ಳತನಗಳು ದಿನೇ ದಿನೇ ಹೆಚ್ಚಾಗುತ್ತಿದ್ದು, ಇವುಗಳನ್ನು ನಿಯಂತ್ರಿಸಲುವಲ್ಲಿ ಗೃಹ ಇಲಾಖೆ ವಿಫಲವಾಗಿರುವ ಬಗ್ಗೆ **ಮಾನ್ಯ ಗೃಹ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಐವನ್ ಡಿ'ಸೋಜಾ,** ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಅಂತರ್ಜಲ ಕುಸಿತದಿಂದಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೀರಿನ ಅಭಾವ ಉಂಟಾಗಿರುವುದರಿಂದ ಅಂತರ್ಜಲ ವೃದ್ಧಿಸಲು ಇಲಾಖೆಯ ಮುಂದಿರುವ ಯೋಜನೆಗಳ ಬಗ್ಗೆ **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ** ಗಮನ ಸೆಳೆಯುವುದು.

..2

## ೦೫. ನಿಯಮ ೩೩೦ರ ಮೇರೆಗೆ

**ಅ) ಶ್ರೀ ಕೆ.ಸಿ.ಕೊಂಡಯ್ಯ** ಅವರು ಹರಪನಹಳ್ಳಿ ತಾಲ್ಲೂಕನ್ನು ಬಳ್ಳಾರಿ ಜಿಲ್ಲೆಗೆ ಪುನರ್ ಸೇರ್ಪಡೆ ಮಾಡಿ, ಭಾರತ ಸಂವಿಧಾನದ ಅನುಚ್ಛೇದ **೩೭೧ಜೆ** ಮೇರೆಗೆ ಸೌಲಭ್ಯಗಳ ಪ್ರಯೋಜನ ಪಡೆಯುವ ಕುರಿತು ಪ್ರಸ್ತಾಪಿಸುವುದು. (**ಮಾನ್ಯ ಕಂದಾಯ ಸಚಿವರು)**

**ಆ) ಶ್ರೀ ಪುಟ್ಟಣ್ಣ** ಅವರು ಬಿ.ಇಡಿ. ಕಾಲೇಜುಗಳ ಪ್ರವೇಶ ಪ್ರಕ್ರಿಯೆ ಪ್ರತಿವರ್ಷ ವಿಳಂಬವಾಗುತ್ತಿರುವುದರಿಂದ, ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಉನ್ನತ ಶಿಕ್ಷಣ ಸಚಿವರು)**

**ಶ್ರೀನಿವಾಸ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**